# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 572 (573)
ಸದಸ್ಯರ ಹೆಸರು : ಡಾ: ಚಂದ್ರಶೇಖರ ಬಸವರಾಜ ಪಾಟೀಲ (ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ : 22-07-2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕಲ್ಯಾಣ ಕರ್ನಾಟಕ ಭಾಗದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯಡಿಯಲ್ಲಿ ಖಾಲಿಯಿರುವ ಹುದ್ದೆಗಳ ಸಂಖ್ಯೆಯೆಷ್ಟು: | ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ: 1547 ಇದರಲ್ಲಿ ಸರ್ಕಾರಿ ಕಚೇರಿ ಮತ್ತು ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 1107 ಹಾಗೂ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ 440 ಹುದ್ದೆಗಳು ಖಾಲಿ ಇರುತ್ತವೆ. |
| ಆ) | ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ: | **ಸರ್ಕಾರಿ ಪದವಿ ಪೂರ್ವ ಕಾಲೇಜು/ಕಚೇರಿಗೆ ಸಂಬಂಧಿಸಿದಂತೆ:-**<br>ಕಲ್ಯಾಣ ಕರ್ನಾಟಕ ಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಉಪನ್ಯಾಸಕರ ಒಟ್ಟು 719 ಹುದ್ದೆಗಳ ಪೈಕಿ 36 ಹುದ್ದೆಗಳ ಭರ್ತಿಗೆ ಸರ್ಕಾರದ ಅನುಮತಿ ನೀಡಲಾಗಿದೆ.<br>ಪ್ರಸ್ತುತ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿಯಿರುವ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳ ನೇರ ನೇಮಕಾತಿಯಲ್ಲಿ, ಮೀಸಲಾತಿ ಬಿಂದುಗಳಿಗೆ ಸಂಬಂಧಿಸಿದಂತೆ ನಿರ್ದೇಶನಾಲಯದಿಂದ ಮಾರ್ಗದರ್ಶನ ಕೋರಿ ಪ್ರಸ್ತಾವನೆ ಸಲ್ಲಿಸಿದ್ದು, ಈ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ(ಸೇವಾ ನಿಯಮಗಳು)ಯೊಂದಿಗೆ ಸಮಾಲೋಚಿಸಲಾಗುತ್ತಿದ್ದು, ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಇದಲ್ಲದೆ ಉಪನ್ಯಾಸಕರ ನೇರ ನೇಮಕಾತಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮಾತ್ರ ಅಧಿಸೂಚಿತ ವಿಷಯಗಳ ಸ್ನಾತಕೋತ್ತರ ಪದವಿಗಳಲ್ಲಿ (ಬಿ.ಇಡಿ. ಪದವಿಯೊಂದಿಗೆ) ಪ್ರಸ್ತುತ ಇರುವ ಶೇಕಡ 55 ಅಂಕಗಳನ್ನು ಪರಿಷ್ಕರಿಸಿ ಶೇಕಡ 50 ಅಂಕಗಳಿಗೆ ನಿಗಧಿಪಡಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br>ಮುಂದುವರೆದು, ನೇರ ನೇಮಕಾತಿ ಕೋಟಾ ಮೂಲಕ ಭರ್ತಿ ಮಾಡಲು ಉಳಿದ ಒಟ್ಟು 405 ಉಪನ್ಯಾಸಕ ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ನಿರ್ದೇಶಕರು, ಶಾಲಾ ಶಿಕ್ಷಣ |
| ಇ) | ಇದ್ದಲ್ಲಿ, ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | |

| | | | |
|---|---|---|---|
| | | | ಇಲಾಖೆ (ಪದವಿ ಪೂರ್ವ) ಇವರಿಂದ ಸರ್ಕಾರಕ್ಕೆ ದಿನಾಂಕ: 27–06–2024 ರಂದು ಪ್ರಸ್ತಾವನೆ ಸಲ್ಲಿಕೆಯಾಗಿದ್ದು, ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಸಹಮತಿ ಕೋರಿ ಕಡತ ಸಂಖ್ಯೆ: ಇಪಿ 110 ಡಿಜಿಡಿ 2024 ರಲ್ಲಿ ಕ್ರಮವಹಿಸಲಾಗಿದ್ದು, ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.<br><br>ಉಳಿದ 278 ಹುದ್ದೆಗಳನ್ನು ಪ್ರೌಢ ಶಾಲಾ ಸಹಶಿಕ್ಷಕರ ವೃಂದದಿಂದ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳ ಹುದ್ದೆಗೆ ಬಡ್ತಿ ಮೂಲಕ ಭರ್ತಿ ಮಾಡಲು ವೃಂದ ಮತ್ತು ನೇಮಕಾತಿ ನಿಯಮ 2014ರಲ್ಲಿ, ಶೇಕಡಾ 25ರಷ್ಟು ಹುದ್ದೆಗಳಿಗೆ ಅವಕಾಶ ಕಲ್ಪಿಸಿದೆ. ಅದರಂತೆ ಮುಂಬಡ್ತಿ ಪ್ರಕ್ರಿಯೆಗಾಗಿ ಅರ್ಹತೆ ಹೊಂದಿರುವ ಪ್ರೌಢ ಶಾಲಾ ಶಿಕ್ಷಕರ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ಸಲ್ಲಿಸುವ ಬಗ್ಗೆ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ), ಬೆಂಗಳೂರು ಇವರು ದಿನಾಂಕ:23–04–2024ರಂದು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಪ್ರಸ್ತುತ ಶಾಲಾ ಶಿಕ್ಷಣ ಇಲಾಖೆ(ಪ್ರಾಥಮಿಕ ಮತ್ತು ಪ್ರೌಢ)ಯ ನಾಲ್ಕು ವಿಭಾಗಗಳಲ್ಲಿ ಸ್ನಾತಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಪರಿಶೀಲಿಸಿ, ಸಾಮಾನ್ಯ ಜೇಷ್ಠತಾ ಪಟ್ಟಿಯನ್ನು ಅಂತಿಮಗೊಳಿಸಿ, ಅಂತಿಮ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿ ಮತ್ತು ವಿಷಯವಾರು ಅರ್ಹತಾ ಪಟ್ಟಿಗಳನ್ನು ಸಿದ್ಧಪಡಿಸುವ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಅಭಿಪ್ರಾಯ ಕೋರಲಾಗಿದ್ದು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಅಭಿಪ್ರಾಯ ಸ್ವೀಕೃತವಾದ ನಂತರ ನಿಯಮಾನುಸಾರ ಜೇಷ್ಠತಾ ಪಟ್ಟಿಯನ್ನು ಹೊರಡಿಸಿ, ತದನಂತರ ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು. |
| | | | ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 31 ಹುದ್ದೆಗಳು ಸೇರಿದಂತೆ ಒಟ್ಟು 247 ಪ್ರಾಂಶುಪಾಲರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿಗೆ ಸಂಬಂಧಿಸಿದಂತೆ, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 1 ಸೆಹಿಮ 2022 ದಿನಾಂಕ: 28–12–2022 ಮತ್ತು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 02 ಸೆಹಿಮ 2023 ದಿನಾಂಕ: 08–03–2023ರಲ್ಲಿ ಪರಿಷ್ಕರಿಸಿರುವ ಮೀಸಲಾತಿ ಬಿಂದುಗಳನ್ವಯ ಮರು ನಿಗದಿಪಡಿಸಿ, ಮೀಸಲಾತಿ ರೋಸ್ಟರ್‌ಗಳ ವಿವರಗಳೊಂದಿಗೆ ನಮೂನೆ–6ರಲ್ಲಿ ಭರ್ತಿ ಮಾಡಿದ ಅನುಬಂಧ–1 (216 ಉಳಿದ ಮೂಲ ವೃಂದದ ಪ್ರಾಂಶುಪಾಲರ ಹುದ್ದೆಗಳಿಗೆ) ಮತ್ತು ಅನುಬಂಧ–2 (31 ಕಲ್ಯಾಣ ಕರ್ನಾಟಕ ಪ್ರಾಂಶುಪಾಲರ ಹುದ್ದೆಗಳಿಗೆ) ನ್ನು |

| | | |
|---|---|---|
| | | ಸಿದ್ಧಪಡಿಸಿ ಪ್ರಸ್ತಾವನೆ ಸಲ್ಲಿಸುವಂತೆ ಸರ್ಕಾರದ ಪತ್ರ ಸಂಖ್ಯೆ: ಇಪಿ 73 ಡಿಜಿಡಿ 2021 ದಿನಾಂಕ: 21–06–2024 ರಲ್ಲಿ ನಿರ್ದೇಶಕರಿಗೆ ತಿಳಿಸಲಾಗಿದೆ.<br><br>ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಗೆ ಪ್ರಾಂಶುಪಾಲರ ವೃಂದಕ್ಕೆ ಬಡ್ತಿ ನೀಡುವ ಕುರಿತಂತೆ ಕಲ್ಯಾಣ ಕರ್ನಾಟಕ ಭಾಗದ ಹುದ್ದೆಗಳು ಸೇರಿದಂತೆ ಉಳಿಕೆ ಮೂಲ ವೃಂದದ 300 ಉಪನ್ಯಾಸಕರು ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ 61 ಉಪನ್ಯಾಸಕರುಗಳ ಅಗತ್ಯ ವ್ಯಕ್ತಿಪೂರ್ವೋತ್ತರ ದಸ್ತಾವೇಜುಗಳೊಂದಿಗೆ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ದಿನಾಂಕ: 07.03.2024ರಂದು ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಗೆ ದಿನಾಂಕ:12–03–2024ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿ ಸಮಿತಿ ಸಭೆಯನ್ನು ನಡೆಸಲಾಗಿತ್ತು.<br><br>ತದನಂತರ, ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯು ದಿನಾಂಕ:14–03–2024ರಂದು ನಡೆಸಿದ ಸಭೆಯಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ಯಲ್ಲಿ 2016 ರಿಂದ ಇಲ್ಲಿಯವರೆಗೆ ಉಪನ್ಯಾಸಕರ ವೃಂದದಿಂದ ಪ್ರಾಂಶುಪಾಲರ ವೃಂದಕ್ಕೆ ಮುಂಬಡ್ತಿ ನೀಡುವ ಸಂದರ್ಭಗಳಲ್ಲಿ ಮೀಸಲಾತಿಯನ್ನು ಪಾಲಿಸದಿರುವ ಕುರಿತು ಸಮಾಜ ಕಲ್ಯಾಣ ಇಲಾಖೆ, ಸಿಬ್ಬಂದಿ ಆಡಳಿತ ಸುಧಾರಣೆ ಇಲಾಖೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳು ಒಟ್ಟಾಗಿ ಪರಿಶೀಲಿಸಿ ಬ್ಯಾಕ್‌ಲಾಗ್ ಹುದ್ದೆಗಳನ್ನು ಗುರುತಿಸುವವರೆಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಾಂಶುಪಾಲರ ವೃಂದಕ್ಕೆ ಸಂಬಂಧಪಟ್ಟಂತೆ ಯಾವುದೇ ಮುಂಬಡ್ತಿ ಪ್ರಕ್ರಿಯೆಯನ್ನು ನಡೆಸಬಾರದೆಂದು ಸಮಿತಿಯು ಸೂಚಿಸಿರುತ್ತದೆ. ಅದರಂತೆ, ಈ ಬಗ್ಗೆ ಸಿ.ಆ.ಸು.ಇಲಾಖೆಯೊಂದಿಗೆ ಸಮಾಲೋಚನೆಯಲ್ಲಿದ್ದು ಹಾಗೂ ಈ ಪ್ರಸ್ತಾವನೆಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆರವರು ನೀಡುವ ಅಂತಿಮ ವರದಿಯನ್ನು ನಿರೀಕ್ಷಿಸಲಾಗುತ್ತಿದ್ದು, ಸಿ.ಆ.ಸು.ಇಲಾಖೆಯಿಂದ ಅಂತಿಮ ವರದಿ ಸ್ವೀಕೃತವಾದ ನಂತರ ಈ ಬಗ್ಗೆ ನಿಯಮಾನುಸಾರ ಕ್ರಮವಹಿಸಲಾಗುವುದು.<br><br>• ಕಲ್ಯಾಣ ಕರ್ನಾಟಕ ಭಾಗದ ಹುದ್ದೆಗಳೂ ಸೇರಿದಂತೆ 10 ದೈಹಿಕ ಶಿಕ್ಷಣ ಉಪನ್ಯಾಸಕರ ಹುದ್ದೆಗಳ ಭರ್ತಿಗಾಗಿ ನಿರ್ದೇಶನಾಲಯದ ಪತ್ರ ದಿನಾಂಕ: 30/01/2024 ರಲ್ಲಿ ಕೇಂದ್ರಿಕೃತ ದಾಖಲಾತಿ ಘಟಕವನ್ನು ಕೋರಲಾಗಿದ್ದು, ಸದರಿ ಪ್ರಾಧಿಕಾರದಿಂದ ಆಯ್ಕೆ ಪ್ರಕ್ರಿಯೆಗಾಗಿ ಅಧಿಸೂಚನೆ |

ಹೊರಡಿಸುವುದು ಬಾಕಿ ಇರುತ್ತದೆ.

- ಕಲ್ಯಾಣ ಕರ್ನಾಟಕ ಭಾಗದ ಹುದ್ದೆಗಳೂ ಸೇರಿದಂತೆ 10 ಗ್ರಂಥಪಾಲಕರ ಹುದ್ದೆಗಳ ಭರ್ತಿಗಾಗಿ ನಿರ್ದೇಶನಾಲಯದ ಪತ್ರ ದಿನಾಂಕ: 18/11/2021, 30/04/2022, 22/11/2022 ಮತ್ತು 16/11/2023 ರಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರವನ್ನು ಕೋರಲಾಗಿದ್ದು, ಸದರಿ ಪ್ರಾಧಿಕಾರದಿಂದ ಆಯ್ಕೆ ಪ್ರಕ್ರಿಯೆಗಾಗಿ ಅಧಿಸೂಚನೆ ಹೊರಡಿಸುವುದು ಬಾಕಿ ಇರುತ್ತದೆ.

- ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 38 ಪ್ರ.ದ.ಸ ಹುದ್ದೆಗಳು ಸೇರಿದಂತೆ ಇಲಾಖೆಯಲ್ಲಿ ನೇರ ನೇಮಕಾತಿಗೆ ಲಭ್ಯವಾಗುವ 77 ಪ್ರ.ದ.ಸ ಹುದ್ದೆಗಳನ್ನು ಸದ್ಯಕ್ಕೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗುತ್ತಿದೆ. ಇನ್ನುಳಿದ 102 ಪ್ರ.ದ.ಸ ಹುದ್ದೆಗಳನ್ನು ಅರ್ಹ ದ್ವಿ.ದ.ಸ ನೌಕರರಿಗೆ ಬಡ್ತಿ ನೀಡುವ ಮೂಲಕ ಭರ್ತಿಮಾಡಲು ಕ್ರಮವಹಿಸಲಾಗುವುದು.

- ಅದೇ ರೀತಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 27 ದ್ವಿ.ದ.ಸ ಹುದ್ದೆಗಳಲ್ಲಿ ನೇರ ನೇಮಕಾತಿ ಲಭ್ಯವಾಗುವ ಹುದ್ದೆಗಳನ್ನು ಅನುಕಂಪದ ಮೂಲಕ ಭರ್ತಿ ಮಾಡಲು ಹಾಗೂ ಬಡ್ತಿ ಲಭ್ಯವಾಗುವ ಹುದ್ದೆಗಳನ್ನು ಅರ್ಹ ಗ್ರೂಪ್-ಡಿ ಮತ್ತು ಪರಿಚಾರಕರಿಗೆ ಬಡ್ತಿ ನೀಡುವ ಮೂಲಕ ಭರ್ತಿಗೆ ಕ್ರಮವಹಿಸಲಾಗುವುದು.

- ಖಾಲಿ ಇರುವ ಗ್ರೂಪ್-ಡಿ ವೃಂದದ 152 ಹುದ್ದೆಗಳಲ್ಲಿ 22 ಪರಿಚಾರಕರ ಹುದ್ದೆಗಳನ್ನು ಅರ್ಹ ಗ್ರೂಪ್-ಡಿ ವೃಂದದ ನೌಕರರಿಗೆ ಬಡ್ತಿ ನೀಡುವ ಮೂಲಕ ಭರ್ತಿಗೆ ಕ್ರಮವಹಿಸಲಾಗುವುದು. ಇನ್ನುಳಿದ 130 ಹುದ್ದೆಗಳನ್ನು ಅನುಕಂಪದ ಆಧಾರದ ಮೇಲೆ ನೇಮಕಾತಿಗಾಗಿ 4 ವಿಭಾಗದಿಂದ ಸ್ವೀಕೃತವಾಗುವ ಪ್ರಸ್ತಾವನೆಗಳಲ್ಲಿ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ನೀಡುವ ಮೂಲಕ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.

**<u>ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಿಗೆ ಸಂಬಂಧಿಸಿದಂತೆ:-</u>**

ಸರ್ಕಾರದ ಆದೇಶ ಸಂಖ್ಯೆ: ಇಡಿ 159 ಟಿಪಿಯು 2012 ದಿನಾಂಕ: 16-05-2013, ಇಡಿ 144 ಟಿಪಿಯು 2016 ದಿನಾಂಕ 09-02-2017, 12-06-2017, 12-09-2017, 23-07-2021 ಮತ್ತು 02-08-2021, ಇಪಿ 39 ಟಿಪಿಯು 2022 ದಿನಾಂಕ: 22-08-2022 ಮತ್ತು ಇಪಿ 03 ಟಿಪಿಯು 2023 ದಿನಾಂಕ: 01-07-2023ರ ವಿವಿಧ ಆದೇಶಗಳಲ್ಲಿ ದಿನಾಂಕ: 31-12-2015 ರವರೆಗೆ ವಿವಿಧ ಕಾರಣಗಳಿಂದ ತೆರವಾದ ಖಾಸಗಿ ಅನುದಾನಿತ ಪದವಿ ಪೂರ್ವ

| | | |
|---|---|---|
| | | ಕಾಲೇಜುಗಳಲ್ಲಿನ ನಿಗದಿತ ಕಾರ್ಯಭಾರವಿರುವ ಬೋಧಕ ಹುದ್ದೆಗಳಿಗೆ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ ಭರ್ತಿ ಮಾಡಲು ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ಒಟ್ಟು 145 ಬೋಧಕ ಹುದ್ದೆಗಳಿಗೆ ಅವಕಾಶ ಕಲ್ಪಿಸಲಾಗಿದೆ. ಅದರಂತೆ, ಇಲಾಖೆಯು ಆಡಳಿತ ಮಂಡಳಿಗಳಿಂದ ಸ್ವೀಕೃತವಾದ ಪ್ರಸ್ತಾವನೆಗಳನ್ನು ಪರಿಶೀಲಿಸಿ ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿನ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಒಟ್ಟು 68 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ: 01-01-2016 ರಿಂದ 31-12-2022 ರವರೆಗೆ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ಸರ್ಕಾರದ ಪತ್ರ ಸಂಖ್ಯೆ: ಇಡಿ 53 ಎಸ್‌ಒಹೆಚ್ 1987 ದಿನಾಂಕ: 22-12-1987 ರ ಪತ್ರದಲ್ಲಿ "ಅನುದಾನಿತ ಶಾಲೆಗಳಲ್ಲಿ ದಿನಾಂಕ: 04-11-1986 ಯಿಂದಾಗಲಿ ಅಥವಾ ನಂತರವಾಗಲಿ ಬೋಧಕೇತರ ಹುದ್ದೆಗಳು ಖಾಲಿಯಾದಲ್ಲಿ, ದಿನಾಂಕ: 04-11-1986ರ ನಂತರ ತುಂಬಲು ಅವಕಾಶವಿಲ್ಲ" ಎಂದು ಆದೇಶಿಸಲಾಗಿರುತ್ತದೆ. ಈ ಹಿನ್ನಲೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದ ತೆರವಾಗುವ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಇರುವುದಿಲ್ಲ. |

**ಸಂಖ್ಯೆ: ಇಪಿ 239 ಡಿಜಿಡಬ್ಲ್ಯೂ 2024**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು